**All India Radio: Bangalore**
**National Bulletin In Kannada**
**26.05.2026 1.10 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**26.05.2026 1.10 hrs**

**<>><><*><><<>**

ಮುಖ್ಯಾಂಶಗಳು

**೧. ನವದೆಹಲಿಯಲ್ಲಿ ಕ್ವಾಡ್ ವಿದೇಶಾಂಗ ಸಚಿವರ ಸಭೆ ಸಂಪನ್ನ ; ಸದಸ್ಯ ರಾಷ್ಟ್ರಗಳ ನಡುವೆ ಸಹಭಾಗಿತ್ವ ವೃದ್ಧಿಗೆ ಸಹಮತ**

**೨. ಕರ್ನಾಟಕ, ಬಿಹಾರ ದ್ವೈವಾರ್ಷಿಕ ವಿಧಾನಪರಿಷತ್ ಚುನಾವಣಾ ವೇಳಾಪಟ್ಟಿ ಪ್ರಕಟ ; ಜೂನ್ ೧೮ ರಂದು ಮತದಾನ**

**೩. ರಾಷ್ಟ್ರಪತಿ ದ್ರೌಪದಿ ಮುರ್ಮು ಸಿಕ್ಕಿಂ ಪ್ರವಾಸ ; ಗ್ಯಾಂಗ್ಟಾಕ್‌ಗೆ ಆಗಮನ**

**೪. ನಾರ್ವೆ ಚೆಸ್ ೨೦೨೬ ; ಮೊದಲ ದಿನವೇ ಭಾರತದ ಯುವ ಗ್ರ್ಯಾಂಡ್‌ಮಾಸ್ಟರ್‌ಗಳಿಂದ ಶುಭಾರಂಭ**

**<>><><*><><<>**

ನವದೆಹಲಿಯಲ್ಲಿ ಆಯೋಜಿಸಲಾಗಿದ್ದ ಕ್ವಾಡ್ ವಿದೇಶಾಂಗ ಸಚಿವರ ಸಭೆ ಇಂದು ಯಶಸ್ವಿಯಾಗಿ ಸಂಪನ್ನಗೊಂಡಿದೆ. ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅಧ್ಯಕ್ಷತೆ ವಹಿಸಿದ್ದ ಈ ಉನ್ನತ ಮಟ್ಟದ ಸಭೆಯಲ್ಲಿ ಆಸ್ಟ್ರೇಲಿಯಾ ವಿದೇಶಾಂಗ ಸಚಿವೆ ಪೆನ್ನಿ ವಾಂಗ್, ಜಪಾನ್ ವಿದೇಶಾಂಗ ಸಚಿವ ತೊಶಿಮಿತ್ಸು ಮೊಟೇಗಿ ಮತ್ತು ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೊರೂಬಿಯೊ ಪಾಲ್ಗೊಂಡಿದ್ದರು. ಸಭೆಯ ನಂತರ ಜಂಟಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಸಚಿವ ಡಾ.ಎಸ್.ಜೈಶಂಕರ್ ಕ್ವಾಡ್ ರಾಷ್ಟ್ರಗಳ ನಡುವಿನ ಪರಸ್ಪರ ಸಹಕಾರವನ್ನು ಮತ್ತಷ್ಟು ಬಲಪಡಿಸುವ ಮತ್ತು ಇತರ ದೇಶಗಳಿಗೆ ನೆರವಾಗುವ ಅಗತ್ಯವನ್ನು ಒತ್ತಿ ಹೇಳಿದರು. ತಾವು ಮುಕ್ತ ಸಮಾಜವನ್ನು ಹೊಂದಿರುವ ರಾಷ್ಟ್ರಗಳಾಗಿದ್ದು, ಸಮೃದ್ಧಿ ಮತ್ತು ಪ್ರಗತಿಯ ಹಾದಿಯಲ್ಲಿ ನಾವೀನ್ಯತೆ ಮತ್ತು ಸೃಜನಶೀಲತೆಗೆ ಹೆಚ್ಚಿನ ಪ್ರೋತ್ಸಾಹ ನೀಡುತ್ತೇವೆ. ಪ್ರಜಾಪ್ರಭುತ್ವ ರಾಷ್ಟ್ರಗಳಾಗಿ ಜಗತ್ತಿನ ಸಾಮಾನ್ಯ ಪಿಡುಗಾಗಿರುವ ಭಯೋತ್ಪಾದನೆಯನ್ನು ಜಂಟಿಯಾಗಿ ಮಟ್ಟ ಹಾಕಲು ವಿಶೇಷ ಗಮನ ಹರಿಸಲಾಗಿದೆ ಎಂದು ತಿಳಿಸಿದರು. ಸಭೆಯಲ್ಲಿ ಪ್ರಸ್ತುತ ಜಾಗತಿಕ ವಿದ್ಯಾಮಾನಗಳ ಕುರಿತು ವಿಸ್ತೃತ ದ್ವಿಪಕ್ಷೀಯ ಚರ್ಚೆಗಳು ನಡೆದಿದ್ದು, ಪ್ರಮುಖವಾಗಿ ಇಂಡೋ-ಪೆಸಿಫಿಕ್ ವಲಯಕ್ಕೆ ಸಂಬಂಧಿಸಿದ ಪ್ರಮುಖ ವಿಷಯಗಳ ಮೇಲೆ ನಾಲ್ಕು ರಾಷ್ಟ್ರಗಳು ಗಮನ

ಕೇಂದ್ರೀಕರಿಸಿದವು. ಕಡಲ ವಲಯದಲ್ಲಿ ಕಣ್ಗಾವಲು, ಕಡಲ ಜಾಗೃತಿ, ಸರಕು ಜಾಲ, ಸಾಗರದಾಳದ ಕೇಬಲ್‌ಗಳ ವ್ಯವಸ್ಥೆ, ತರಬೇತಿ, ಸಾಮರ್ಥ್ಯವೃದ್ಧಿ ಮತ್ತು ಮಾನವೀಯ ನೆರವು ಹಾಗೂ ವಿಪತ್ತು ನಿರ್ವಹಣಾ ಚಟುವಟಿಕೆಗಳಲ್ಲಿ ಕ್ವಾಡ್ ರಾಷ್ಟ್ರಗಳ ಸಹಭಾಗಿತ್ವ ವಿಸ್ತರಿಸುತ್ತಿದೆ ಎಂದು ತಿಳಿಸಿದರು. ಈ ವೇಳೆ ಮಾತನಾಡಿದ ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೋ ರೂಬಿಯೊ, ಕ್ವಾಡ್ ನಿರ್ಣಾಯಕ ಖನಿಜಗಳ ಚೌಕಟ್ಟು, ನಾಲ್ಕು ರಾಷ್ಟ್ರಗಳ ಆರ್ಥಿಕ ನೀತಿಗಳನ್ನು ಉತ್ತಮವಾಗಿ ಬಳಸಿಕೊಳ್ಳಲು ಹಾಗೂ ಪೂರೈಕೆ ಸರಪಳಿಯನ್ನು ಬಲಪಡಿಸಲು ಹೂಡಿಕೆಯನ್ನು ಸಂಯೋಜಿಸಲು ಮಾಗದರ್ಶನ ನೀಡಲಿವೆ ಎಂದರು. ಜಪಾನ್ ವಿದೇಶಾಂಗ ಸಚಿವ ತೊಶಿಮಿತ್ಸು ಮೊಟೇಗಿ ಹೊರ್ಮುಜ್ ಜಲಸಂಧಿಯಲ್ಲಿ ಮುಕ್ತ ಮತ್ತು ಸುರಕ್ಷಿತ ನೌಕಾಯಾನವನ್ನು ಖಚಿಪಡಿಸಕೊಳ್ಳಲು ಹಾಗೂ ಪಶ್ಚಿಮ ಏಷ್ಯಾದಲ್ಲಿ ಸ್ಥಿರತೆ ತರಲು ರಾಜತಾಂತ್ರಿಕ ಪ್ರಯತ್ನಗಳು ಪ್ರಮುಖವಾಗಿದೆ ಎಂದು ತಿಳಿಸಿದರು. ಇಂಧನ ಭದ್ರತೆ ಮತ್ತು ನಿರ್ಣಾಯಕ ಖನಿಜಗಳ ಕ್ಷೇತ್ರ ಸೇರಿದಂತೆ ಇಂದು ಕ್ವಾಡ್ ಒಕ್ಕೂಟ ಕೆಲವು ಪ್ರಮುಖ ಉಪಕ್ರಮಗಳನ್ನು ಮುನ್ನಡೆಸಿವೆ ಎಂದು ಆಸ್ಟ್ರೇಲಿಯಾ ವಿದೇಶಾಂಗ ಸಚಿವೆ ಪೆನ್ನಿವಾಂಗ್ ತಿಳಿಸಿದರು. ಕ್ವಾಡ್ ಸಭೆಯ ಹಿನ್ನೆಲೆ ಭಾರತಕ್ಕೆ ಭೇಟಿ ನೀಡಿರುವ ಜಪಾನ್ ಮತ್ತು ಆಸ್ಟ್ರೇಲಿಯಾ ವಿದೇಶಾಂಗ ಸಚಿವರು ಇಂದು ಪ್ರಧಾನಿ ನರೇಂದ್ರ ಮೋದಿ ಅವರನ್ನು ಸೇವಾ ತೀರ್ಥದಲ್ಲಿ ಭೇಟಿ ಮಾಡಲಿದ್ದಾರೆ. ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಕೂಡ ಆಸ್ಟ್ರೇಲಿಯಾ ವಿದೇಶಾಂಗ ಸಚಿವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ.

**<>><><*><><<>**

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಯಶಸ್ವಿಯಾಗಿ ೧೨ ವರ್ಷಗಳನ್ನು ಪೂರೈಸಿರುವ ಹಿನ್ನೆಲೆಯಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಶ್ಲಾಘನೆ ವ್ಯಕ್ತಪಡಿಸಿದ್ದಾರೆ. ಈ ೧೨ ವರ್ಷಗಳ ಅವಧಿ ಭಾರತದ ಸಾಂಸ್ಕೃತಿಕ ಮತ್ತು ಅಭಿವೃದ್ಧಿಯ ಪಥದಲ್ಲಿ ಮಹತ್ವದ ಪರಿವರ್ತನಾ ಪರ್ವವಾಗಿದೆ ಎಂದು ಬಣ್ಣಿಸಿದ್ದಾರೆ. ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ಅವರು, ೨೦೧೪ರಲ್ಲಿ ನರೇಂದ್ರ ಮೋದಿ ಅವರು, ಪ್ರಧಾನಿಯಾಗಿ ಪ್ರಮಾಣವಚನ ಸ್ವೀಕರಿಸಿದ ದಿನ ಭಾರತದ ಆಡಳಿತ ಶೈಲಿ ದೂರದೃಷ್ಟಿ ನಾಯಕತ್ವ ಮತ್ತು ರಾಷ್ಟ್ರೀಯ ಸಂಕಲ್ಪದಲ್ಲಿ ಒಂದು ನಿರ್ಣಾಯಕ ಮತ್ತು ಐತಿಹಾಸಿಕ ಬದಲಾವಣೆಗೆ ನಾಂದಿ ಹಾಡಿತು ಎಂದಿದ್ದಾರೆ. ಬಿಜೆಪಿ ರಾಷ್ಟ್ರೀಯಾಧ್ಯಕ್ಷ ನಿತಿನ್ ನಬಿನ್ ಕೂಡ ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಸಂದೇಶ ಹಂಚಿಕೊಂಡಿದ್ದು, ಸುಶಾಸನದ ೧೨ ವರ್ಷಗಳ ಈ ಪಯಣ ವಿಕಸಿತ ಭಾರತ -೨೦೪೭ರ ಸಂಕಲ್ಪಕ್ಕೆ ಬಲಿಷ್ಠ ಅಡಿಪಾಯ ಹಾಕಿದೆ ಎಂದಿದ್ದಾರೆ. ಪ್ರಧಾನಿಯವರ ನೇತೃತ್ವದಲ್ಲಿ ಭಯೋತ್ಪಾದನೆಗೆ ದಿಟ್ಟ ಪ್ರತ್ಯುತ್ತರ ನೀಡುತ್ತಾ ತನ್ನ ಸಾ ಭೌಮತ್ವದ ರಕ್ಷಣೆಗೆ ಭಾರತ ಸನ್ನದ್ಧವಾಗಿದೆ. ಇಂದು ಸಬ್ ಕಾ ಸಾತ್ ಸಬ್ ಕಾ ವಿಕಾಸ್ ಮಂತ್ರದ ಮೂಲಕ ಯೋಜನೆಗಳನ್ನು ಬದಲಾವಣೆಯ ಸಾಧನಗಳನ್ನಾಗಿ ಪರಿವರ್ತಿಸಲಾಗಿದೆ ಎಂದು ತಿಳಿಸಿದ್ದಾರೆ.

<>><><*><><<>

ಕರ್ನಾಟಕ ಮತ್ತು ಬಿಹಾರ ವಿಧಾನಪರಿಷತ್‌ಗಳ ಕೆಲವು ಸದಸ್ಯರ ನಿವೃತ್ತಿಯಿಂದ ತೆರವಾಗಲಿರುವ ಸ್ಥಾನಗಳನ್ನು ಆಯಾ ರಾಜ್ಯಗಳ ವಿಧಾನಸಭಾ ಸದಸ್ಯರಿಂದ ಭರ್ತಿ ಮಾಡಲು ದ್ವೈವಾರ್ಷಿಕ ಚುನಾವಣೆಯ ವೇಳಾಪಟ್ಟಿಯನ್ನು ಭಾರತೀಯ ಚುನಾವಣಾ ಆಯೋಗ ಇಂದು ಪ್ರಕಟಿಸಿದೆ. ಬಿಹಾರದ ೯ ಸದಸ್ಯರ ಅಧಿಕಾರಾವಧಿ ಮುಂಬರುವ ಜೂನ್ ೧೮ರಂದು ಕೊನೆಗೊಳ್ಳಲಿದ್ದರೆ ಕರ್ನಾಟಕದ ೭ ಸದಸ್ಯರ ಅವಧಿ ಜೂನ್ ೩೦ರಂದು ಮುಕ್ತಾಯಗೊಳ್ಳಲಿದೆ. ಈ ಹಿನ್ನೆಲೆಯಲ್ಲಿ ಉಭಯ ರಾಜ್ಯಗಳ ಒಟ್ಟು ೧೬ ಸ್ಥಾನಗಳಿಗೆ ಚುನಾವಣೆ ನಡೆಯಲಿದೆ. ಕರ್ನಾಟಕ ವಿಧಾನಪರಿಷತ್‌ನಿಂದ ಸದಸ್ಯರಾದ ಗೋವಿಂದರಾಜು, ನಸೀರ್ ಅಹಮ್ಮದ್, ಎನ್.ನಾಗರಾಜು, ಪ್ರತಾಪ್ ಸಿಂಹ ನಾಯಕ್.ಕೆ, ತಿಪ್ಪಣ್ಣಪ್ಪ ಸುನೀಲ್ ವಲ್ಯಪುರೆ ಮತ್ತು ಬಿ.ಕೆ.ಹರಿಪ್ರಸಾದ್ ನಿವೃತ್ತಿ ಹೊಂದಲಿರುವ ೭ ಸದಸ್ಯರಾಗಿದ್ದಾರೆ. ಜೂನ್ ೧ ರಂದು ಚುನಾವಣೆಗೆ ಅಧಿಕೃತ ಅಧಿಸೂಚನೆ ಹೊರಬೀಳಲಿದ್ದು, ನಾಮಪತ್ರ ಸಲ್ಲಿಸಲು ಜೂನ್ ೮ ಕೊನೆಯ ದಿನವಾಗಿದೆ. ಜೂನ್ ೯ ರಂದು ನಾಮಪತ್ರ ಪರಿಶೀಲನೆ ನಡೆಯಲಿದ್ದು, ನಾಮಪತ್ರ ಹಿಂಪಡೆಯಲು ಜೂನ್ ೧೧ ಕೊನೆಯ ದಿನವಾಗಿದೆ. ಜೂನ್ ೧೮ರಂದು ಬೆಳಗ್ಗೆ ೯ ಗಂಟೆಯಿಂದ ಸಂಜೆ ೪ ಗಂಟೆಯವರೆಗೆ ಮತದಾನ ಪ್ರಕ್ರಿಯೆ ನಡೆಯಲಿದ್ದು, ಅಂದೇ ೫ ಗಂಟೆಗೆ ಮತ ಎಣಿಕೆ ನಡೆಯಲಿದೆ. ಒಟ್ಟಾರೆ ಚುನಾವಣಾ ಪ್ರಕ್ರಿಯೆ ಜೂನ್ ೨೦ರೊಳಗಾಗಿ ಪೂರ್ಣಗೊಳ್ಳಬೇಕಿದೆ ಎಂದು ಆಯೋಗದ ಪ್ರಕಟಣೆ ತಿಳಿಸಿದೆ.

<>><><*><><<>

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದಿನಿಂದ ಸಿಕ್ಕಿಂ ರಾಜ್ಯಕ್ಕೆ ಮೂರು ದಿನಗಳ ಅಧಿಕೃತ ಪ್ರವಾಸ ಕೈಗೊಂಡಿದ್ದಾರೆ. ತಮ್ಮ ಈ ಭೇಟಿಯ ಅವಧಿಯಲ್ಲಿ ಅವರು ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದು, ಹಲವು ಪ್ರಮುಖ ಸ್ಥಳಗಳನ್ನು ವೀಕ್ಷಿಸಲಿದ್ದಾರೆ. ಇಂದು ಗ್ಯಾಂಗ್ಟಾಕ್‌ಗೆ ಆಗಮಿಸಿದ ಅವರನ್ನು ರಾಜ್ಯಪಾಲ ಓಂಪ್ರಕಾಶ್ ಮಾಥುರ್, ಮುಖ್ಯಮಂತ್ರಿ ಪ್ರೇಮ್‌ಸಿಂಗ್ ತಮಾಂಗ್ ಮತ್ತಿತರ ಗಣ್ಯರು ಬರಮಾಡಿಕೊಂಡರು. ಇಂದು ರಾಷ್ಟ್ರಪತಿಗಳು ಮಹಿಳೆಯರಿಗೆ ಸುರಕ್ಷಿತ ಮತ್ತು ಕೈಗೆಟಕುವ ಸಂಚಾರ ಸೌಲಭ್ಯ ಒದಗಿಸಲು ಗುಲಾಬಿ ಬಸ್‌ಗಳಿಗೆ ಚಾಲನೆ ನೀಡಲಿದ್ದಾರೆ. ಇಂದು ಸಂಜೆ ರಾಷ್ಟ್ರಪತಿಗಳು ಗ್ಯಾಂಗ್ಟಾಕ್‌ನಲ್ಲಿರುವ ಪ್ರಸಿದ್ಧ 'ನಮ್ಗ್ಯಾಲ್ ತಂತ್ರಜ್ಞಾನ ಸಂಸ್ಥೆಗೆ ಭೇಟಿ ನೀಡಲಿದ್ದಾರೆ. ತಮ್ಮ ಪ್ರವಾಸದ ಎರಡನೇ ದಿನವಾದ ನಾಳೆ, ರಾಷ್ಟ್ರಪತಿ ಭಾರತ-ಚೀನಾ ಗಡಿಯ ಪ್ರಮುಖ ಆಯಕಟ್ಟಿನ ಪ್ರದೇಶವಾದ 'ನಾಥೂ ಲಾ ಪಾಸ್'ಗೆ ಭೇಟಿ ನೀಡಲಿದ್ದು, ಅಲ್ಲಿ ನಿಯೋಜಿತರಾಗಿರುವ ಭಾರತೀಯ ಸೇನೆಯ ಯೋಧರೊಂದಿಗೆ ಸಂವಾದ ನಡೆಸಲಿದ್ದಾರೆ. ಇನ್ನು ಪ್ರವಾಸದ ಅಂತಿಮ ದಿನದಂದು ಗ್ಯಾಂಗ್ಟಾಕ್‌ನ ಪಾಲ್ಜೋರ್ ಸ್ಟೇಡಿಯಂನಲ್ಲಿ ನಡೆಯಲಿರುವ ವಿಶೇಷ ಕಾರ್ಯಕ್ರಮದಲ್ಲಿ ಸಿಕ್ಕಿಂ ಪೊಲೀಸರಿಗೆ ಅತ್ಯುನ್ನತ

‘ರಾಷ್ಟ್ರಪತಿ ಪೊಲೀಸ್ ಕಲರ್’ ಪ್ರಶಸ್ತಿಯನ್ನು ಪ್ರದಾನ ಮಾಡಲಿದ್ದಾರೆ. ಇದರೊಂದಿಗೆ ಈ ಪ್ರತಿಷ್ಠಿತ ಪ್ರಶಸ್ತಿ ಲಭಿಸಿದ ದೇಶದ ೧೫ನೇ ರಾಜ್ಯವಾಗಿ ಸಿಕ್ಕಿಂ ಹೊರಹೊಮ್ಮಲಿದೆ.

<>><><*><><<>

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಇಂದು ರಾಜಸ್ಥಾನದ ಭಾರತ-ಪಾಕಿಸ್ತಾನ ಅಂತಾರಾಷ್ಟ್ರೀಯ ಗಡಿಯಲ್ಲಿರುವ ‘ಸಾಂಚು’ ಗಡಿ ಚೌಕಿಗೆ ಭೇಟಿ ನೀಡಿ, ದೇಶ ಕಾಯುವ ಬಿಎಸ್‌ಎಫ್ ಯೋಧರ ಬದ್ಧತೆಯನ್ನು ಶ್ಲಾಘಿಸಿದರು. ಇದೇ ವೇಳೆ ಅವರು ಗಡಿ ಗ್ರಾಮಗಳ ಸಮಗ್ರ ಅಭಿವೃದ್ಧಿಗಾಗಿ ‘ವೈಬ್ರೆಂಟ್ ವಿಲೇಜಸ್ ಕಾರ್ಯಕ್ರಮ-೨’ ಯೋಜನೆಗೆ ಚಾಲನೆ ನೀಡಿದರು. ಈ ಯೋಜನೆಯಡಿ ಬಾರ್ಮರ್, ಬಿಕಾನೇರ್ ಮತ್ತು ಜೈಸಲ್ಮೇರ್ ಜಿಲ್ಲೆಗಳ ಗಡಿ ಗ್ರಾಮಗಳಲ್ಲಿ ರಸ್ತೆ, ವಿದ್ಯುತ್, ಶಿಕ್ಷಣ ಹಾಗೂ ಉದ್ಯೋಗ ಸೇರಿದಂತೆ ಮೂಲಸೌಕರ್ಯಗಳನ್ನು ಬಲಪಡಿಸಲಾಗುತ್ತದೆ. ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಭಜನ್ ಲಾಲ್ ಶರ್ಮಾ, ಕೇಂದ್ರ ಸಚಿವ ಅರ್ಜುನ್ ರಾಮ್ ಮೇಘವಾಲ್ ಹಾಗೂ ಹಿರಿಯ ಭದ್ರತಾ ಅಧಿಕಾರಿಗಳು ಉಪಸ್ಥಿತರಿದ್ದರು.

<>><><*><><<>

ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ರಚಿಸಿರುವ ಅಪ್ನಾಪನ್ ; ನರೇಂದ್ರ ಮೋದಿ ಸಂಗ್ ಮೇರೆ ಅನುಭವ್ ಎಂಬ ಪುಸ್ತಕವನ್ನು ಮಾಜಿ ಉಪರಾಷ್ಟ್ರಪತಿ ಎಂ.ವೆಂಕಯ್ಯನಾಯ್ಡು ಮತ್ತು ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರು ನವದೆಹಲಿಯಲ್ಲಿಂದು ಲೋಕಾರ್ಪಣೆಗೊಳಿಸಿದರು.

<>><><*><><<>

ಬಿಜು ಜನತಾದಳ ಬಿಜೆಡಿಯ ಮಾಜಿ ರಾಜ್ಯಸಭಾ ಸದಸ್ಯ ದೇಭಾಶಿಶ್ ಸಾಮಂತರಾಯ್ ಇಂದು ಅಧಿಕೃತವಾಗಿ ಭಾರತೀಯ ಜನತಾಪಕ್ಷ ಬಿಜೆಪಿಗೆ ಸೇರ್ಪಡೆಯಾಗಿದ್ದಾರೆ. ನವದೆಹಲಿಯಲ್ಲಿರುವ ಪಕ್ಷದ ಪ್ರಧಾನ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಅರುಣ್ ಸಿಂಗ್ ಮತ್ತು ಒಡಿಶಾ ರಾಜ್ಯ ಬಿಜೆಪಿ ಅಧ್ಯಕ್ಷ ಮನ್ ಮೋಹನ್ ಸಾಮಲ್ ಸೇರಿದಂತೆ ಪಕ್ಷದ ಹಿರಿಯ ನಾಯಕರ ಸಮ್ಮುಖದಲ್ಲಿ ಅವರನ್ನು ಪಕ್ಷಕ್ಕೆ ಬರಮಾಡಿಕೊಳ್ಳಲಾಯಿತು.

<>><><*><><<>

ತಮಿಳುನಾಡಿನ ಎಐಎಡಿಎಂಕೆ ಪಕ್ಷದ ಮೂವರು ಶಾಸಕರ ರಾಜೀನಾಮೆಯನ್ನು ಸಭಾಧ್ಯಕ್ಷರು ಅಂಗೀಕರಿಸಿದ ಬೆನ್ನಲ್ಲೇ ರಾಜ್ಯದ ಮಧುರಾಂತಕಮ್, ಪೆರುಂದುರೈ ಮತ್ತು ಧಾರಾಪುರಂ ವಿಧಾನಸಭಾ ಕ್ಷೇತ್ರಗಳು ಅಧಿಕೃತವಾಗಿ ತೆರವಾಗಿದೆ ಎಂದು ಘೋಷಿಸಲಾಗಿದೆ. ಇದಕ್ಕೂ ಮುನ್ನ ಎರಡೂ ಕ್ಷೇತ್ರಗಳಿಂದ ಜಯಗಳಿಸಿದ್ದ ಮುಖ್ಯಮಂತ್ರಿ ಸಿ.ಜೋಸೆಫ್ ವಿಜಯ್ ಅವರು, ತಿರುಚಿ ಪೂರ್ವ ಕ್ಷೇತ್ರಕ್ಕೆ ರಾಜೀನಾಮೆ ನೀಡಿದ್ದರಿಂದ ಆ ಕ್ಷೇತ್ರವು ತೆರವಾಗಿತ್ತು.

<>><><*><><<>

ಓಸ್ಲೋದಲ್ಲಿ ಆರಂಭವಾಗಿರುವ ಪ್ರತಿಷ್ಠಿತ ನಾರ್ವೆ ಚೆಸ್-೨೦೨೬ ಟೂರ್ನಿಯ ಮೊದಲ ದಿನವೇ ಭಾರತ ಶುಭಾರಂಭ ಕಂಡಿದ್ದು, ಯುವ ಗ್ರ್ಯಾಂಡ್ ಮಾಸ್ಟರ್ಸ್‌ಗಳಾದ ಆರ್.ಪ್ರಜ್ಞಾನಂದ ಮತ್ತು ದೊಮ್ಮರಾಜು ಗುಕೇಶ್ ತಮ್ಮ ಆರಂಭಿಕ ಪಂದ್ಯಗಳಲ್ಲಿ ಗೆಲುವು ದಾಖಲಿಸಿದ್ದಾರೆ. ಇಬ್ಬರು ಆಟಗಾರರ ಕ್ಲಾಸಿಕಲ್ ಸುತ್ತುಗಳು ಡ್ರಾನಲ್ಲಿ ಅಂತ್ಯಗೊಂಡ ಹಿನ್ನೆಲೆ ಅಂತಿಮ ಫಲಿತಾಂಶಕ್ಕೆ ನಡೆದ ಟೈಬ್ರೇಕರ್ ಮಾದರಿಯ ಆರ್ಮ್‌ಗೆಡ್ಡನ್ ಪಂದ್ಯಗಳಲ್ಲಿ ಜಯಗಳಿಸಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ <>*><>**